ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಬೀದರ್ ತೋಟಗಾರಿಕೆ ವಿಜ್ಞಾನಗಳ ಕಾಲೇಜಿಗೆ ಭೂಮಿ ಹಸ್ತಾಂತರಿಸುವ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):-

082 (787) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಗೆ 2007-08ರಲ್ಲಿ ತೋಟಗಾರಿಕೆ ವಿಜ್ಞಾನಗಳ ಕಾಲೇಜು ಮಂಜೂರಾಗಿದ್ದು, ಅದಕ್ಕಾಗಿ ದಿನಾಂಕ: 15.02.2014ರಲ್ಲಿ ಸರ್ಕಾರವು ಸರ್ವೆ ನಂ.287/1ರಲ್ಲಿ 40 ಎಕರೆ ಹಾಗೂ 20 ವಸತಿ ಗೃಹಗಳನ್ನು ನಿಗಧಿಪಡಿಸಿದ ದರದಲ್ಲಿ ರೇಷ್ಮೆ ಇಲಾಖೆಯಿಂದ ತೋಟಗಾರಿಕೆ ವಿಶ್ವವಿದ್ಯಾಲಯಕ್ಕೆ ಹಸ್ತಾಂತರಿಸಲು ಆದೇಶ ಮಾಡಿರುವುದು ನಿಜವೇ ;

(ಆ) ಇಲ್ಲಿಯವರೆಗೆ ರೇಷ್ಮೆ ಇಲಾಖೆಯಿಂದ ತೋಟಗಾರಿಕೆ ಇಲಾಖೆಗೆ ಹಸ್ತಾಂತರವಾಗದಿರಲು ಕಾರಣವೇನು ?